**Bangalore**
**Regional News**
**22.10.2025: 1430hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು :</u>

೧. ನಾಡಿನಾದ್ಯಂತ ಸಡಗರ, ಸಂಭ್ರಮದ ದೀಪಾವಳಿ; ಇಂದು ಬಲಿಪಾಡ್ಯಮಿ ಹಬ್ಬ ಆಚರಣೆ

೨. ಪಟಾಕಿ ಸಿಡಿತದಿಂದ ಅವಘಡ; ಬೆಂಗಳೂರು, ಕೋಲಾರ ಸೇರಿದಂತೆ ಹಲವೆಡೆ ಗಾಯಾಳುಗಳಿಗೆ ಚಿಕಿತ್ಸೆ

೩. ಹಾಸನಾಂಬ ದರ್ಶನಕ್ಕೆ ಇಂದು ಕೊನೆಯ ದಿನ; ಈವರೆಗೆ ೨೫ ಲಕ್ಷಕ್ಕೂ ಹೆಚ್ಚು ಭಕ್ತರ ಭೇಟಿ

೪. ಇದೇ ೨೬ರ ವರೆಗೆ ರಾಜ್ಯದ ವಿವಿಧೆಡೆ ಭಾರೀ ಮಳೆ - ಹವಾಮಾನ ಇಲಾಖೆ ಮುನ್ನೆಚ್ಚರಿಕೆ

********

ಬೆಳಕಿನ ಹಬ್ಬ ದೀಪಾವಳಿಯ ಮೂರನೇ ದಿನವಾದ ಇಂದು ಬಲಿಪಾಡ್ಯಮಿಯನ್ನು ನಾಡಿನಾದ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ವಿಷ್ಣು ವಾಮನ ಮೂರ್ತಿ ಅವತಾರ ತಾಳಿ ಬಲಿಚಕ್ರವರ್ತಿಯನ್ನು ಪಾತಾಳಕ್ಕೆ ತುಳಿದ ದಿನವಾದ ಇಂದು ಬಲಿ ಚಕ್ರವರ್ತಿಯನ್ನು ಸ್ಮರಿಸುವ ಆಚರಣೆಗಳನ್ನು ಕೈಗೊಳ್ಳಲಾಗುತ್ತಿದ್ದು, ಹಲವಾರು ಮನೆತನಗಳಲ್ಲಿ ಬಲಿ ಪೂಜೆಯನ್ನು ನೆರವೇರಿಸುವ ಪರಿಪಾಠವಿದೆ. ದೇವಾಲಯಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹಲವು ಮನೆತನಗಳಲ್ಲಿ ಪಾರಂಪರಿಕವಾಗಿ ಆಚರಿಸುವ ದೀಪಾವಳಿಯ ನೋಮು ಆಚರಣೆಯನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಯಿತು. ಚಿತ್ತಾಕರ್ಷಕ ರಂಗೋಲಿ ಹಾಗೂ ದೀಪಗಳು ಮನೆಗಳ ಮುಂದೆ ಕಂಗೊಳಿಸುತ್ತಿವೆ. ಹಸಿರು ಪಟಾಕಿ ಕಡ್ಡಾಯಗೊಳಿಸಿರುವ ಪರಿಣಾಮ ಪಟಾಕಿ ಹಚ್ಚುವವರ ಪ್ರಮಾಣ ಕಡಿಮೆಯಾಗಿದೆ. ಹಲವೆಡೆಗಳಲ್ಲಿ ಗೋಪೂಜೆ ನೆರವೇರಿಸಲಾಗುತ್ತಿದೆ.

********

ದೀಪಾವಳಿ ಆಚರಣೆ ಸಂದರ್ಭದಲ್ಲಿ ಪಟಾಕಿ ಸಿಡಿತದಿಂದ ಸಂಭವಿಸಿದ ಅವಘಡಗಳಲ್ಲಿ ಗಾಯಗೊಂಡು ಬೆಂಗಳೂರಿನ ವಿವಿಧ ಆಸ್ಪತ್ರೆಗಳಲ್ಲಿ ಅನೇಕ ಮಂದಿ ಚಿಕಿತ್ಸೆ ಪಡೆಯುತ್ತಿರುವ ಬಗ್ಗೆ ವರದಿಯಾಗಿದೆ. ನಾರಾಯಣ ನೇತ್ರಾಲಯದಲ್ಲಿ ಒಟ್ಟು ೭೫ ಮಂದಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು

ನಾರಾಯಣ ನೇತ್ರಾಲಯದ ನಿರ್ದೇಶಕರಾದ ಡಾ. ನರೇನ್ ಶೆಟ್ಟಿ ತಿಳಿಸಿದ್ದಾರೆ. ಒಟ್ಟು ಪ್ರಕರಣಗಳಲ್ಲಿ ಶೇಕಡ ೬೦ಕ್ಕಿಂತ ಹೆಚ್ಚು ಮಕ್ಕಳು ಗಾಯಗೊಂಡಿರುವುದಾಗಿ ಅವರು ಮಾಹಿತಿ ನೀಡಿದ್ದಾರೆ. ಪಟಾಕಿ ಹಚ್ಚುವಾಗ ಮಕ್ಕಳ ಮೇಲೆ ನಿಗಾವಹಿಸುವುದು ಮತ್ತಿತರ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಜನರಲ್ಲಿ ಮನವಿ ಮಾಡಿದ್ದಾರೆ.

********

ಬೆಳಕಿನ ಹಬ್ಬ ದೀಪಾವಳಿಯಂದು ಪಟಾಕಿ ಸಿಡಿತದಿಂದ ಕೋಲಾರ ತಾಲ್ಲೂಕಿನ ವಿವಿಧೆಡೆ ೧೦ ಕ್ಕೂ ಹೆಚ್ಚು ಮಂದಿ ಮಕ್ಕಳು, ವೃದ್ಧರು ಗಾಯಗೊಂಡಿರುವುದಾಗಿ ನೇತ್ರ ತಜ್ಞ ಡಾ.ಹೆಚ್.ಆರ್.ಮಂಜುನಾಥ್ ತಿಳಿಸಿದ್ದಾರೆ. ಈ ಬಾರಿ ದೃಷ್ಟಿದೋಷದಂತಹ ಯಾವುದೇ ಗಂಭೀರ ಪ್ರಕರಣಗಳು ವರದಿಯಾಗಿಲ್ಲ. ಆಸ್ಪತ್ರೆಗೆ ಬಂದವರಲ್ಲಿ ಓರ್ವ ಯುವಕ ಸೇರಿದಂತೆ ೧೨ ವರ್ಷಕ್ಕಿಂತ ಕಡಿಮೆ ವಯಸ್ಸಿನ ೧೦ ಮಕ್ಕಳು ಇದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ. ಪಟಾಕಿ ಸಿಡಿತದಿಂದ ಗಾಯಗೊಂಡವರ ಸಂಖ್ಯೆ ಹಿಂದಿನ ವರ್ಷಕ್ಕಿಂತ ಈ ಬಾರಿ ಬಹಳಷ್ಟು ಕುಸಿತವಾಗಿದೆ. ಇದಕ್ಕೆ ಜನರಲ್ಲಿ ಜಾಗೃತಿ ಹಾಗೂ ಪರಿಸರ ಕಾಳಜಿ ಪ್ರಮುಖ ಕಾರಣವಾಗಿದೆ ಎಂದು ಅವರು ಹೇಳಿದ್ದಾರೆ.

********

ದೀಪಾವಳಿ ಹಬ್ಬದ ಪ್ರಯುಕ್ತ ನೈರುತ್ಯ ರೈಲ್ವೆ ಹುಬ್ಬಳ್ಳಿ ವಿಭಾಗದ ಮೂಲಕ ಒಟ್ಟು ೧೯ ವಿಶೇಷ ರೈಲುಗಳು ಸಂಚರಿಸುತ್ತಿದ್ದು, ಇವುಗಳಲ್ಲಿ ೮ ರೈಲುಗಳು ಹುಬ್ಬಳ್ಳಿ ವಿಭಾಗದಿಂದಲೇ ಸಂಚರಿಸುತ್ತಿವೆ' ಎಂದು ವಿಭಾಗೀಯ ರೈಲ್ವೆ ಹೆಚ್ಚುವರಿ ವ್ಯವಸ್ಥಾಪಕ ಪ್ರೇಮಚಂದ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಶೇಕಡ ೪೬ರಷ್ಟು ರೈಲುಗಳ ಸೇವೆಯಲ್ಲಿ ಹೆಚ್ಚಳವಾಗಿದೆ. ಪ್ರಯಾಣಿಕರ ಸಂಖ್ಯೆಯಲ್ಲಿಯೂ ಶೇಕಡ ೫೩ ಹೆಚ್ಚಳವಾಗಿದೆ. ಇದರೊಂದಿಗೆ ಕಳೆದ ೧೫ ದಿನಗಳಲ್ಲಿ ಹುಬ್ಬಳ್ಳಿ ವಿಭಾಗವು ೨೬ ಕೋಟಿ ೭ ಲಕ್ಷ ರೂಪಾಯಿ ಆದಾಯ ಗಳಿಸಿದೆ' ಎಂದು ಹೇಳಿದರು. ಈ ವರ್ಷ ದೀಪಾವಳಿ ಹಬ್ಬದ ವೇಳೆಯಲ್ಲಿ ೨ ಲಕ್ಷದ ೯೫ ಸಾವಿರ ಪ್ರಯಾಣಿಕರು ಪ್ರಯಾಣಿಸಿದ್ದಾರೆ.

ಪ್ರಯಾಣಿಕರ ಸುಗಮ ಹಾಗೂ ಸುರಕ್ಷತೆಯ ಪ್ರಯಾಣಕ್ಕೆ ಹೆಚ್ಚು ಆದ್ಯತೆ ನೀಡಲಾಗಿದೆ ಎಂದು ಅವರು ಆಕಾಶವಾಣಿಗೆ ಮಾಹಿತಿ ನೀಡಿದರು.

****ಧ್ವನಿ***ಪ್ರೇಮಚಂದ

********

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಮಂತ್ರಾಲಯದ ಗುರು ರಾಘವೇಂದ್ರರ ಬೃಂದಾವನಕ್ಕೆ ಪೂಜೆ ಸಲ್ಲಿಸಿ, ಸುಭೇಂದ್ರ ತೀರ್ಥ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು, ಸಂಸದ ಕುಮಾರ ನಾಯಕ್ ಮತ್ತಿತರರು ಉಪಸ್ಥಿತರಿದ್ದರು.

********

ಹಾಸನದಲ್ಲಿ ನಡೆಯುತ್ತಿರುವ ಹಾಸನಾಂಬ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಸಾರ್ವಜನಿಕ ದರ್ಶನದ ಅಂತಿಮ ದಿನವಾದ ಇಂದು ಸಾರಿಗೆ ಹಾಗೂ ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ಆಗಮಿಸಿ ದೇವರ ದರ್ಶನ ಪಡೆದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ಸಾವಿರದ ೨೦೦ ವರ್ಷಗಳ ಇತಿಹಾಸ ಹೊಂದಿರುವ ಹಾಸನಾಂಬ ದೇವಾಲಯಕ್ಕೆ ರಾಜ್ಯ ಹೊರ ರಾಜ್ಯಗಳಿಂದ ಭಕ್ತಾದಿಗಳು ಆಗಮಿಸಿ ದೇವರ ದರ್ಶನ ಪಡೆಯುತ್ತಿದ್ದು, ಈ ಬಾರಿ ಇಂದಿಗೆ ೨೫ ಲಕ್ಷ ಮೀರಿ ಭಕ್ತರು ದೇವರ ದರ್ಶನ ಪಡೆದಿದ್ದಾರೆ ಎಂದು ಮಾಹಿತಿ ನೀಡಿದರು. ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಹಕಾರದಿಂದ ಶಾಂತಿಯುತವಾಗಿ ದೇವರ ದರ್ಶನ ನಡೆದಿದ್ದು, ಹುಂಡಿ ಹಣ ಹೊರತುಪಡಿಸಿ ಈಗಾಗಲೇ ೨೦ ಕೋಟಿ ಆದಾಯ ದೇವಾಲಯಕ್ಕೆ ಬಂದಿದೆ ಅದನ್ನು ದೇವಾಲಯದ ಖಾತೆಯಲ್ಲಿ ಇರಿಸಲು ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ ಎಂದರು.

********

ಬೆಂಗಳೂರು ನಗರದಲ್ಲಿ ೪ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ೫೦೦ ಕಿಲೋಮೀಟರ್ ಉದ್ದದ ರಸ್ತೆಗಳನ್ನು ವೈಟ್‌ಟಾಪಿಂಗ್ ಮಾಡಲು ವಿಸ್ತೃತ ಯೋಜನಾ ವರದಿ - ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಈ ಕುರಿತು ಅವರು, ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದು, ನಗರದಲ್ಲಿ ಒಂದು ಸಾವಿರದ ೬೫೦ ಕಿಲೋಮೀಟರ್ ಉದ್ದದ ಪ್ರಮುಖ ರಸ್ತೆಗಳಿದ್ದು, ಹೊಸದಾಗಿ ೧೦೪ ಕಿಲೋಮೀಟರ್ ರಸ್ತೆಗೆ ವೈಟ್ ಟಾಪಿಂಗ್ ಮಾಡಲಾಗುತ್ತಿದೆ. ಈಗಾಗಲೇ ೧೪೮ ಕಿಲೋಮೀಟರ್ ಉದ್ದದ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಒಟ್ಟು ೮೩ ರಸ್ತೆಗಳ ಅಭಿವೃದ್ಧಿಗೆ ಒಂದು ಸಾವಿರದ ೮೦೦ ಕೋಟಿ ರೂಪಾಯಿ ಹಣ ವೆಚ್ಚ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

********

ಬಹು ಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ವಿಜಯಪುರ ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ತಾರಾನಾಥ ಶಂಕರ ತಿಳಿಸಿದ್ದಾರೆ. ಒಟ್ಟು ೪೦ ಯೋಜನೆಗಳು ಪೂರ್ಣಗೊಂಡು ಕಾರ್ಯ ನಿರ್ವಹಿಸುತ್ತಿದ್ದು, ಪೂರ್ಣಗೊಂಡ ಯೋಜನೆಗಳಿಂದ ಜಿಲ್ಲೆಯ ೬೩೯ ಗ್ರಾಮ, ಜನವಸತಿಗಳಿಗೆ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

****ಧ್ವನಿ *****ತಾರಾನಾಥ ಶಂಕರ

********

ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಇಂದು ಮಳೆಯಾಗಿದೆ. ಇಂದಿನಿಂದ ಇದೇ ೧೯ರ ವರೆಗೆ ದಕ್ಷಿಣ ಕನ್ನಡ, ಉಡುಪಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ಬಾಗಲಕೋಟೆ, ಬೆಳಗಾವಿ, ಬೀದರ್, ಕಲಬುರಗಿ ಸೇರಿದಂತೆ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಕೋಲಾರ, ಮಂಡ್ಯ, ರಾಮನಗರ ಸೇರಿದಂತೆ ದಕ್ಷಿಣ ಒಳನಾಡಿನ ಬಹುತೇಕ ಕಡೆಗಳಲ್ಲಿ ಸಾಧಾರಣದಿಂದ ಹಗುರ ಮಳೆಯಾಗುವ ಸಾಧ್ಯತೆ ಇದೆ. ಮುಂದಿನ ೪೮ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ ಇರಲಿದ್ದು, ಹಗುರ ಮಳೆ ಸಾಧ್ಯತೆ. ಗರಿಷ್ಠ ೨೬, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಇರಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

*******

ಬೆಳಗಾವಿ ಜಿಲ್ಲೆಯಲ್ಲಿ ೬೦ ವರ್ಷಕ್ಕಿಂತ ಮೇಲ್ಪಟ್ಟ ೫ ಲಕ್ಷದ ೭ ಸಾವಿರದ ೯೧೯ ಹಿರಿಯ ನಾಗರಿಕರು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ. ಕಳೆದ ಆರು ತಿಂಗಳಲ್ಲಿ ೩೦ ಸಾವಿರದ ೪೨೯ ಜನರಿಗೆ ಉದ್ಯೋಗ ನೀಡಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ನೋಂದಾಯಿಸಿಕೊಂಡಿರುವ ಹಿರಿಯ ನಾಗರಿಕರ ಸಂಖ್ಯೆ  ಶೇಕಡ ೬೧.೩೬ರಷ್ಟು ಹೆಚ್ಚಾಗಿದೆ. ೨೦೨೫-೨೬ರ ಆರ್ಥಿಕ ವರ್ಷದ ಮೊದಲಾರ್ಧದಲ್ಲಿ, ೮೦ ವರ್ಷಕ್ಕಿಂತ ಮೇಲ್ಪಟ್ಟ ೪೫೭ ವೃದ್ಧರಿಗೆ ಈ ಯೋಜನೆಯ ಮೂಲಕ ಕೆಲಸ ನೀಡಲಾಗಿದೆ. ಕಳೆದ ವರ್ಷ, ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ೪ ಲಕ್ಷದ ೪೬ ಸಾವಿರದ ೭೮೩ ಹಿರಿಯ ನಾಗರಿಕರು ಕಾರ್ಮಿಕರಾಗಿ ನೋಂದಾಯಿಸಿಕೊಂಡಿದ್ದರು. ಈ ಸಂಖ್ಯೆ ಈಗ ೫

ಲಕ್ಷದ ೭ ಸಾವಿರದ ೯೧೯ಕ್ಕೆ ಏರಿದೆ. ತಾಲೂಕುಗಳ ಪೈಕಿ ಹುಕ್ಕೇರಿಯಲ್ಲಿ ಅತಿ ಹೆಚ್ಚು ಹಿರಿಯ ನಾಗರಿಕರು ಕಾರ್ಮಿಕರಾಗಿ ನೋಂದಾಯಿಸಿಕೊಂಡಿದ್ದಾರೆ. ನಂತರ ಅಥಣಿಯಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ. ಹುಕ್ಕೇರಿಯಲ್ಲಿ, ೬೦ ರಿಂದ ೮೦ ವರ್ಷ ವಯಸ್ಸಿನ ೫೫ ಸಾವಿರದ ೭೬ ಮತ್ತು ೮೦ ವರ್ಷಕ್ಕಿಂತ ಮೇಲ್ಪಟ್ಟ ಒಂದು ಸಾವಿರದ ೬೦೨ ಜನರು ನೋಂದಾಯಿಸಿಕೊಂಡಿದ್ದಾರೆ.

********

ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲೂಕಿನ ಕದ್ರಾ -ಕೊಡಸಳ್ಳಿ ಕೆಪಿಸಿ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅನುಮತಿ ನೀಡಿ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಆದೇಶಿಸಿದ್ದಾರೆ. ಇತ್ತೀಚೆಗೆ ಸುರಿದ ಭಾರಿ ಮಳೆಯಿಂದಾಗಿ ಗುಡ್ಡ ಕುಸಿತವಾದ ಹಿನ್ನಲೆ, ಕದ್ರಾ ಕೊಡಸಳ್ಳಿ ಕೆಪಿಸಿ ರಸ್ತೆಯಲ್ಲಿ ಸಾರ್ವಜನಿಕ/ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿತ್ತು. ಈ ಹಿಂದೆ ಹೊರಡಿಸಿದ ಆದೇಶವನ್ನು ಮಾರ್ಪಾಡಿಸಿ, ಕದ್ರಾ-ಕೊಡಸಳ್ಳಿ ಕೆಪಿಸಿ ರಸ್ತೆಯಲ್ಲಿ ಲಘು ವಾಹನಗಳು ಮಾತ್ರ ಸಂಚರಿಸಲು ಅವಕಾಶ ಕಲ್ಪಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

****END****